| ಕರ್ನಾಟಕ ವಿಧಾನ ಪರಿಷತ್ತು | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 24 (112) |
| 2 | ಮಾನ್ಯ ಸದಸ್ಯರ ಹೆಸರು | ಶ್ರೀ ಕೆ.ಎಸ್ ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ಉತ್ತರಿಸ ಬೇಕಾದ ದಿನಾಂಕ | 08-12-2025 |
| 4 | ಉತ್ತರಿಸಬೇಕಾದ ಸಚಿವರು | ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮ ಶೀಲತೆ ಹಾಗೂ ಜೀವನೋಪಾಯ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಮಂಜೂರಾದ ಹುದ್ದೆಗಳ ಎದುರಿಗೆ, ಗುತ್ತಿಗೆ ಆಧಾರದ ಮೇಲೆ(In Source) ಕರ್ತವ್ಯ ನಿರ್ವಹಿಸುತ್ತಿರುವ ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು; | ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಮಂಜೂರಾದ ಹುದ್ದೆಗಳ ಎದುರಿಗೆ 2748 ಬೋಧಕೇತರ ಸಿಬ್ಬಂದಿಗಳು ಗುತ್ತಿಗೆ ಆಧಾರದ ಮೇಲೆ(In Source) ಕರ್ತವ್ಯ ನಿರ್ವಹಿಸುತ್ತಿರುತ್ತಾರೆ. |
| ಆ) | ಸುಮಾರು ಎಷ್ಟು ವರ್ಷಗಳಿಂದ ಗುತ್ತಿಗೆ ಆಧಾರದ ಮೇಲೆ ಬೋಧಕೇತರ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ; | ವಿವಿಧ ಸ್ವಾಯತ್ತ ಸಂಸ್ಥೆಗಳಲ್ಲಿ ಗುತ್ತಿಗೆ ಅವಧಿಯು ಭಿನ್ನವಾಗಿದ್ದು ಕೆಲವು ಸ್ವಾಯತ್ತ ಸಂಸ್ಥೆಗಳಲ್ಲಿ ಸುಮಾರು 18 ವರ್ಷಗಳಿಂದ ಗುತ್ತಿಗೆ ಆಧಾರದ ಮೇಲೆ ಬೋಧಕೇತರ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ. |
| ಇ) | ಸುಮಾರು 10 ವರ್ಷಕ್ಕಿಂತ ಹೆಚ್ಚಿನ ಸೇವೆ ಸಲ್ಲಿಸಿರುವ ಗುತ್ತಿಗೆ ಸಿಬ್ಬಂದಿಗಳನ್ನು ಖಾಯಂ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ಇಲ್ಲ |
| ಈ) | ಸದರಿ ಗುತ್ತಿಗೆ ಸಿಬ್ಬಂದಿಗಳನ್ನು ಖಾಯಂ ಮಾಡಲು ಮಾನ್ಯ ಘನ ಉಚ್ಛ ನ್ಯಾಯಾಲಯವು ಹೊರಡಿಸಿರುವ ಆದೇಶದನ್ವಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಸಂಶೋಧನಾ ಸಂಸ್ಥೆಗೆ ಸಂಬಂಧಿಸಿದಂತೆ ಮಾನ್ಯ ಉಚ್ಛ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ W.P No: 10614/2023, W.P No:22621/2021, ಹಾಗೂ CCC :575/2023 ರ ಆದೇಶದ ವಿರುದ್ಧ ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಸಂಶೋಧನಾ ಸಂಸ್ಥೆಯು ರಿಟ್ ಅಪೀಲು ಸಂಖ್ಯೆ: W.A.No. 571/2024 (S-RES) C/w W.A. No. 276/024 (S-RES); W.A. No. 446/2024 ಅನ್ನು ದಾಖಲಿಸಲಾಗಿತ್ತು, ಸದರಿ ಪ್ರಕರಣದಲ್ಲಿ ಮಾನ್ಯ ಉಚ್ಛ ನ್ಯಾಯಾಲಯವು ದಿನಾಂಕ: 22.07.2025ರಂದು ನೀಡಿರುವ ಅಂತಿಮ ಆದೇಶದ ಕುರಿತು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ.<br><br>ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಸಂಬಂಧಿಸಿದಂತೆ ಮಾನ್ಯ ಉಚ್ಛ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: WP No. 19344/2014 & 49297/2014, WP No.10713/2023 ಮತ್ತು WP No. 8653/2016 ರ ಆದೇಶದ ವಿರುದ್ಧ ಸರ್ಕಾರದ ವತಿಯಿಂದ W.A. No. 776/2024ನ್ನು ಹಾಗೂ ಸಂಸ್ಥೆಯ ವತಿಯಿಂದ WA No. 731/2024, WA No. 173/2025 ಮತ್ತು W.A. No. 1466/2025 ಗಳನ್ನು ದಾಖಲಿಸಲಾಗಿರುತ್ತದೆ. |

| | | |
|---|---|---|
| | | ಈ ಮಧ್ಯೆ ಸದರಿ ಗುತ್ತಿಗೆ ಸಿಬ್ಬಂದಿಯು ರಿಟ್ ಅರ್ಜಿಯಲ್ಲಿನ ಗೌ. ನ್ಯಾಯಾಲಯದ ಆದೇಶ ಪಾಲನೆಯಾಗಿಲ್ಲವೆಂದು ನ್ಯಾಯಾಂಗ ನಿಂದನಾ ಅರ್ಜಿ ಸಂಖ್ಯೆ CCC No. 209/2024, 519/2024 ಮತ್ತು 658/2024 ಗಳನ್ನು ದಾಖಲಿಸಿರುತ್ತಾರೆ. ಸದರಿ ನ್ಯಾಯಾಂಗ ನಿಂದನಾ ಅರ್ಜಿಗಳೊಂದಿಗೆ ರಿಟ್ ಅಪೀಲುಗಳು ಕ್ಲಬ್ ಆಗಿದ್ದು, ವಿಚಾರಣೆಗೆ ಬಾಕಿ ಇರುತ್ತದೆ.<br><br>ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ ಗೆ ಸಂಬಂಧಿಸಿದಂತೆ ರಿಟ್ ಸಂಖ್ಯೆ: 12683/2023 ಮತ್ತು 12691/2023ನ್ನು ಸದರಿ ಪ್ರಕರಣದಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ:25.09.2025 ರಂದು ನೀಡಿರುವ ಆದೇಶದ ವಿರುದ್ಧ ಸರ್ಕಾರದ ವತಿಯಿಂದ ರಿಟ್ ಅಪೀಲು ಸಂಖ್ಯೆ: 1115/2025 ಅನ್ನು ದಾಖಲಿಸಲಾಗಿದ್ದು ಸದರಿ ರಿಟ್ ಅಪೀಲು ವಜಾಗೊಂಡಿದ್ದು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ SLP ದಾಖಲಿಸುವ ಕುರಿತು ಪರಿಶೀಲಿಸಲಾಗುತ್ತಿದೆ .<br><br>ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಿಸಲಾಗಿದ್ದ ರಿಟ್ ಅರ್ಜಿ ಸಂಖ್ಯೆ: 9829/2020 C/w W.P No:49808/2018. W.P No: 14825/2020, W.P No: 3833/2021, W.P No:3917/2021 ಕ್ಕೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ:21.09.2023 ರಂದು ಅಂತಿಮ ಆದೇಶ ನೀಡಲಾಗಿದ್ದು ಸದರಿ ಆದೇಶ ವಿರುದ್ಧ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅಪೀಲು ಸಂಖ್ಯೆ: 1808/2025 ನ್ನು ದಾಖಲಿಸಲಾಗಿರುತ್ತದೆ.<br><br>ಈ ಮದ್ಯೆ ರಿಟ್ ಅರ್ಜಿದಾರರು ಮಾನ್ಯ ನ್ಯಾಯಾಲಯದ ಆದೇಶ ಪಾಲನೆಯಾಗಿಲ್ಲವೆಂದು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ನ್ಯಾಯಾಂಗ ನಿಂದನೆ ಪ್ರಕರಣ ಸಂಖ್ಯೆ : 1269/2024 ಹಾಗೂ 1272/2024 ಅನ್ನು ದಾಖಲಿಸಿರುತ್ತಾರೆ.<br><br>ಬಳ್ಳಾರಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಬಳ್ಳಾರಿ ಸಂಸ್ಥೆಗೆ ಸಂಬಂಧಿಸಿದಂತೆ ವಿದ್ಯಾರ್ಥಿ/ವಿದ್ಯಾರ್ಥಿನಿಯಮ ನಿಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ದಿನಗೂಲಿ ನೌಕಕರು ಖಾಯಂಗೊಳಿಸುವಂತೆ ಮಾನ್ಯ ಕಾರ್ಮಿಕ ನ್ಯಾಯಾಲಯ , ಹುಬ್ಬಳ್ಳಿಯಲ್ಲಿ ದಾವೆ ಸಂಖ್ಯೆ: 34/1998 ,ಉಚ್ಚ ನ್ಯಾಯಾಲಯದಲ್ಲಿ ದಾಖಲಿಸಲಾಗಿದ್ದ ರಿಟ್ ಅರ್ಜಿ ಸಂಖ್ಯೆ: 3005/2022 ಕ್ಕೆ ಸಂಬಂದಿಸಿದಂತೆ ಮಾನ್ಯ ನ್ಯಾಯಾಲಯವು 11.06.2006 ರಂದು ನೀಡಿರುವ ಆದೇಶದ ವಿರುದ್ಧ ಬಳ್ಳಾರಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಬಳ್ಳಾರಿ ಸಂಸ್ಥೆಯು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ |

| | | |
|---|---|---|
| | | ಅಪೀಲು ಸಂಖ್ಯೆ:951/2007 ಅನ್ನು ದಾಖಲಿಸಲಾಗಿರುತ್ತದೆ. ರಿಟ್ ಅರ್ಜಿದಾರರು ಮಾನ್ಯ ನ್ಯಾಯಲದ ಅದೇಶ ಪಾಲನೆಯಾಗಿಲ್ಲವೆಂದು ಮಾನ್ಯ ಉಚ್ಚನ್ಯಾಯಲಯದ ಧಾರವಾಡ ಪೀಠದಲ್ಲಿ ನ್ಯಾಯಾಂಗ ನಿಂದನೆ ಸಂಖ್ಯೆ: 100060/2025 ಹಾಗೂ ಇತರೆ ನ್ಯಾಯಾಂಗ ನಿಂದನೆ ಪ್ರಕರಣಗಳು ದಾಖಲಿಸಲಾಗಿದ್ದು, ಸದರಿ ಪ್ರಕರಣಗಳ ವಿಚಾರಣೆ ನ್ಯಾಯಾಲಯದಲ್ಲಿ ಬಾಕಿ ಇರುತ್ತದೆ..<br><br>ಮೇಲ್ಕಂಡ ಮಾನ್ಯ ನ್ಯಾಯಾಲದ ಆದೇಶಗಳ ಕುರಿತು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ. |

ಸಂಖ್ಯೆ: ಎಂಇಡಿ 324 ಆರ್ಐ 2025

**(ಡಾ|| ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ,
ಉದ್ಯಮ ಶೀಲತೆ ಹಾಗೂ ಜೀವನೋಪಾಯ ಸಚಿವರು